# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 25 (170) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು |
| ಉತ್ತರಿಸುವ ದಿನಾಂಕ | : | 22.09.2020 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊರೊನಾ ಹಿನ್ನೆಲೆಯಲ್ಲಿ ಚೀನಾದಿಂದ ಭಾರತದತ್ತ ಮುಖ ಮಾಡಿರುವ ಕೈಗಾರಿಕೆಗಳನ್ನು ರಾಜ್ಯದತ್ತ ಸೆಳೆಯಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಕೊರೊನಾ ಹಿನ್ನೆಲೆಯಲ್ಲಿ, ಕೈಗಾರಿಕೆಗಳನ್ನು ರಾಜ್ಯದತ್ತ ಸೆಳೆಯಲು ರಾಜ್ಯ ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br><br>1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ಕೋವಿಡ್ ನಂತರದ ಸಮಯದಲ್ಲಿ ಬಂಡವಾಳ ಆಕರ್ಷಿಸುವ ಸಂಬಂಧ ಶ್ರೀ ನಂದನ್ ನಿಲೇಕಣಿ, ಶ್ರೀಮತಿ ಕಿರಣ್ ಮಜುಂದರ್ ಷಾ ಹಾಗೂ ಶ್ರೀ ಕ್ರಿಸ್ ಗೋಪಾಲಕೃಷ್ಣ ರವರನ್ನೊಳಗೊಂಡ ಉನ್ನತ ಮಟ್ಟದ ಸಭೆಯನ್ನು ದಿನಾಂಕ: 05.05.2020 ರಂದು ನಡೆಸಲಾಗಿದೆ.<br><br>2. ರಾಜ್ಯದಲ್ಲಿ ಬಂಡವಾಳ ಆರ್ಕಷಿಸಲು ರಾಜ್ಯದ ಮುಖ್ಯಕಾರ್ಯದರ್ಶಿಗಳ ನೇತೃತ್ವದಲ್ಲಿ, ರಾಜ್ಯದ ಹಿರಿಯ ಅಧಿಕಾರಿಗಳು, ಟ್ರೇಡ್ / ಚೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರೀಸ್ ಪ್ರತಿನಿಧಿಗಳು ಹಾಗೂ ಅಂತರರಾಷ್ಟ್ರೀಯ ಕಂಪನಿ ಪ್ರತಿನಿಧಿಗಳನ್ನೊಳಗೊಂಡ ವಿಶೇಷ ಕಾರ್ಯಪಡೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಐ/120/ಎಸ್‌ಪಿಐ/2020 ದಿ: 11/05/2020 ರಂತೆ ರಚಿಸಲಾಗಿದೆ.<br><br>3. ಬಂಡವಾಳ ಆಕರ್ಷಿಸಲು ರಾಜ್ಯ ಸರ್ಕಾರವು ಕೈಗಾರಿಕೆ ಸಂಘಗಳ / ಪ್ರಮುಖ ಕೈಗಾರಿಕೆಗಳ ಪ್ರತಿನಿಧಿಗಳೊಂದಿಗೆ, ಇನ್ವೆಸ್ಟ್ ಇಂಡಿಯಾ ಹಾಗೂ ಹಲವು ದೇಶಗಳ ರಾಯಭಾರಿಗಳೊಂದಿಗೆ ಸರಣಿ ಸಭೆಗಳನ್ನು ವೆಬಿನಾರ್ ಮುಖಾಂತರ ಆಯೋಜಿಸಲಾಗಿರುತ್ತದೆ.<br><br>4. ಹೊಸ ಬಂಡವಾಳವನ್ನು ಆಕರ್ಷಿಸಲು ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನೊಳಗೊಂಡ ನೂತನ ಕೈಗಾರಿಕಾ ನೀತಿ 2020-25ನ್ನು ದಿನಾಂಕ: 13/08/2020 ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿದೆ.<br><br>5. ಕರ್ನಾಟಕ ಕೈಗಾರಿಕೆಗಳ(ಸೌಲಭ್ಯ) (ತಿದ್ದುಪಡಿ) ಮಸೂದೆ 2020 ಹೊರಡಿಸಿದೆ. ಅದರನ್ವಯ, ಎಸ್.ಹೆಚ್.ಎಲ್.ಸಿ.ಸಿ. / ಎಸ್.ಎಲ್.ಎಸ್.ಡಬ್ಲ್ಯೂಸಿ.ಸಿ. / ಡಿ.ಎಲ್.ಎಸ್.ಡಬ್ಲ್ಯೂಸಿ.ಸಿ.ಯಿಂದ ಅನುಮೋದನೆ ಪಡೆದ ನಂತರ ಉತ್ಪಾದನಾ ಕೈಗಾರಿಕೆಗಳ ಸ್ಥಾಪನೆಗೆ ಅನುಕೂಲವಾಗುವಂತೆ, ಉದ್ಯಮಗಳಿಗೆ ಸ್ವೀಕೃತಿ ಪ್ರಮಾಣಪತ್ರಗಳನ್ನು ನೀಡಲಾಗುವುದು. ಈ ಪ್ರಮಾಣಪತ್ರವು ವಿವಿಧ ಕೆಳಹಂತದ ಇಲಾಖೆಗಳಿಂದ ಮೂರು ವರ್ಷಗಳ ಆರಂಭಿಕ ಅವಧಿಗೆ ಅಥವಾ ವಾಣಿಜ್ಯ |

| | | |
|---|---|---|
| | | ಕಾರ್ಯಾಚರಣೆಗಳು ಪ್ರಾರಂಭವಾದ ದಿನಾಂಕದಿಂದ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ.<br>6. ಕೈಗಾರಿಕೋದ್ಯಮಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲು ಕರ್ನಾಟಕ ಭೂಸುಧಾರಣೆ ಕಾಯ್ದೆ ಕಲಂ 109 ಗೆ ತಿದ್ದುಪಡಿ ತರಲಾಗಿದೆ.<br>7. ಕಾರ್ಮಿಕ ಕಾನೂನುಗಳನ್ನು ಸರಳೀಕರಣಗೊಳಿಸಲಾಗಿದೆ. |
| ಆ) | ಇದಕ್ಕಾಗಿ ವಿಶೇಷ ಕಾರ್ಯಪಡೆಯನ್ನು ರಚಿಸಲಾಗಿದೆಯೇ ಮತ್ತು ವಿಶೇಷ ಪ್ರೋತ್ಸಾಹಕ ತೀರ್ಮಾನಗಳನ್ನು ಘೋಷಿಸಿದೆಯೇ? | ಹೌದು.<br><br>ದಿನಾಂಕ: 03.06.2020 ರಂದು ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಹೂಡಿಕೆ ಆಕರ್ಷಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ವಿಶೇಷ ಬಂಡವಾಳ ಉತ್ತೇಜನ ಕಾರ್ಯಪಡೆಯ ಸಭೆ ನಡೆಸಲಾಗಿದೆ.<br><br>ಸದರಿ ಸಭೆಯಲ್ಲಿ ಬಂಡವಾಳ ಆರ್ಕಷಿಸಲು ಉಪ ಗ್ರೂಪ್‌ಗಳನ್ನು ರಚಿಸಲು ತೀರ್ಮಾನಿಸಲಾಗಿದ್ದು, ಸದರಿ ಗ್ರೂಪ್‌ಗಳು ಚೀನಾದಲ್ಲಿ ಕಾರ್ಯನಿರ್ವಹಿಸುತ್ತಿರುವ ವಲಯವಾರು ಕಂಪನಿಗಳೊಂದಿಗೆ ಸಭೆಗಳನ್ನು ನಡೆಸಿ ಕರ್ನಾಟಕದಲ್ಲಿ ಬಂಡವಾಳ ಹೂಡಲು ಇರುವ ಅವಕಾಶಗಳು, ಭೂಮಿ ಖರೀದಿ ಮತ್ತು ಕಾರ್ಮಿಕ ಕಾನೂನುಗಳನ್ನು ಸರಳೀಕರಣ ಗೊಳಿಸುತ್ತಿರುವುದನ್ನು ಮನವರಿಕೆ ಮಾಡಿಕೊಡಲಾಗುತ್ತಿದೆ.<br><br>ಹೊಸ ಬಂಡವಾಳವನ್ನು ಆಕರ್ಷಿಸಲು ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನೊಳಗೊಂಡ ನೂತನ ಕೈಗಾರಿಕಾ ನೀತಿ 2020-25ನ್ನು ದಿನಾಂಕ: 13/08/2020 ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿದೆ. |

ಸಿಐ 234 ಎಸ್‌ಪಿಐ 2020

(ಜಗದೀಶ್ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು